ದಿ.04.07.2026.

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ.1018/2020**

**ಪ್ರಾಸಾಃ5**

**ಚಾಸಾಃ8**

| | | |
|---|---|---|
| ಸಾಕ್ಷಿಯ ಹೆಸರು | : | ಪಿ.ಪುಟ್ಟಪ್ಪ |
| ತಂದೆಯ ಹೆಸರು | : | ಪರಸಪ್ಪ |
| ವಯಸ್ಸು | : | 58 ವರ್ಷ |
| ಕೆಲಸ | : | ಎ.ಎಸ್.ಐ, ಹೊಸದುರ್ಗ ಪೊಲೀಸ್ ಸ್ಟೇಷನ್ |
| ವಾಸ | : | ಹೊಸದುರ್ಗ |

**ದಿಃ04.07.2026 ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು 2011 ರಿಂದ 2013 ರವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಯಾಗಿ ಕಾರ್ಯ ನಿರ್ವಹಿಸಿರುತ್ತೇನೆ.

ದಿನಾಂಕ 14.02.2012 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ರಾತ್ರಿ 07.30 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು, ಠಾಣಾ ಮೊಕದ್ದಮೆ ಸಂಖ್ಯೆ.66/2012 ರಂತೆ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡು, ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ದೂರನ್ನು ತೋರಿಸಲಾಗಿ ಈಗಾಗಲೇ ನಿಪಿ-1 ಎಂದು ಗುರತಿಸಲ್ಪಟ್ಟಿದ್ದು, ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-9 ರವರಿಗೆ ಹಸ್ತಾಂತರಿಸಿರುತ್ತೇನೆ.

ದಿ.04.07.2026.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಯು.ಎಸ್ ವಕೀಲರಿಂದ</u>**

ನಿಪಿ-1 ನ್ನು ಚಾಸಾ-1 ರವರು ಬರೆದು ತಂದಿದ್ದರು. ಫಿರ್ಯಾಧಿ ನೀಡಿದ ಸುಳ್ಳು ದೂರನ್ನು ಸ್ವೀಕರಿಸಿಕೊಂಡು ಪ್ರ.ವ.ವರದಿಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ.</u>**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.